# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 2050 (2409)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ವಿಷಯ : ಅಧ್ಯಾಪಕರು ಮತ್ತು ಸಿಬ್ಬಂದಿ ಕೊರತೆ ಇರುವ ಬಗ್ಗೆ

(ಅ) ಮಂಡ್ಯ ಜಿಲ್ಲೆಯ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗಳಲ್ಲಿ ಅಧ್ಯಾಪಕರ ಮತ್ತು ಸಿಬ್ಬಂದಿಯ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳಾವುವು ;

(ಆ) ಮಂಡ್ಯ ಜಿಲ್ಲೆಯ ಸರ್ಕಾರಿ ಆಸ್ಪತ್ರೆಯಲ್ಲಿ ಯಾವ ಯಾವ ರೋಗಕ್ಕೆ/ಖಾಯಿಲೆಗೆ ಸರ್ಜರಿ ಮಾಡಲಾಗುವುದು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಡಯಾಲಿಸಿಸ್ ಕೇಂದ್ರದಲ್ಲಿ ಎಷ್ಟು ಯಂತ್ರಗಳಿವೆ; ಅದರಲ್ಲಿ ಎಷ್ಟು ಯಂತ್ರಗಳು ಕಾರ್ಯನಿರ್ವಹಿಸುತ್ತಿವೆ ; (ವಿವರ ನೀಡುವುದು)

(ಈ) ಮಂಡ್ಯ ಜಿಲ್ಲೆಯಲ್ಲಿ ಇಲ್ಲಿಯವರೆವಿಗೂ "ಡಿ" ಗುಂಪಿನ ನೌಕರರನ್ನು ಹಾಗೂ ದಾದಿಯರನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆಯೇ ; ಮಾಡಿಕೊಂಡಿದ್ದಲ್ಲಿ, ಅದರ ವಿವರ ಹಾಗೂ ನಿಯಮವನ್ನು ತಿಳಿಸುವುದು ?